14. Kasturba medical college, Manipal	1953	250
15. St, John's Medical college, Bangalore	1963	60

No NFW 49 MSF 97

N.O. PALEKAR
Under Secretary to Government
Health & F.W. Department (ME)

ಆರೋಗ್ಯ ಕೇಂದ್ರಗಳಲ್ಲಿ ಸಿಬ್ಬಂದಿಯ ಕೊರತೆ,

333 (306) ಶ್ರೀ ಚನ್ನಿಗಪ್ಪ (ಕೊರಟಗೆರೆ) ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಆರೋಗ್ಯ ಘಟಕಗಳ ಸಂಖ್ಯೆ ಎಷ್ಟು?

ಆ) ಸದರಿ ಕೇಂದ್ರಗಳಲ್ಲಿರುವ ಸಿಬ್ಬಂದಿ ಕೊರತೆ ಎಷ್ಟು?

ಇ) ತುಮಕೂರು ಜಿಲ್ಲೆ ತುರುವೇಕೆರೆ ತಾ: ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಆರೋಗ್ಯ ಘಟಕಗಳಲ್ಲಿ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ಕೊರತೆಯಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಸರ್ಕಾರ ಇದರ ಬಗ್ಗೆ ಕೈಗೊಳ್ಳಲಿರುವ ಕ್ರಮಗಳಾವುವು?

ಡಾ|| ಹೆಚ್. ಸಿ. ಮಹದೇವಪ್ಪ ಆರೋಗ್ಯ ಸಚಿವರು

ಅ) ರಾಜ್ಯದಲ್ಲಿ 1509 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು 596 ಪ್ರಾಥಮಿಕ ಆರೋಗ್ಯ ಘಟಕಗಳಿವೆ.

ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳು ಪ್ರಾಥಮಿಕ ಆರೋಗ್ಯ ಘಟಕಗಳು ಸೇರಿದಂತೆ ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ವಿವಿಧ ವೃಂದಗಳ ಹುದ್ದೆಗಳಲ್ಲಿ 9342 ಹುದ್ದೆಗಳು ಖಾಲಿ ಇವೆ.

ಇ) ಬಂದಿದೆ. ಕರ್ನಾಟಕ ಲೋಕಸೇವಾ ಆಯೋಗವು ವೈದ್ಯಾಧಿಕಾರಿಗಳ ಹುದ್ದೆಗೆ ನೇಮಕಾತಿಗಾಗಿ 400 ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದು, ನೇಮಕಾತಿ ಸಮಯದಲ್ಲಿ ತುರುವೇಕೆರೆ ತಾ:ನ ಖಾಲಿ ಹುದ್ದೆಗಳನ್ನು ತುಂಬಲು ಪರಿಗಣಿಸಲಾಗುವುದು. ವೈದ್ಯೇತರ ಹುದ್ದೆಗಳಿಗೆ ನೇಮಕಾತಿಗಳನ್ನು ನಡೆಸುವಾಗ ತುರುವೆಕೆರೆ ತಾಲ್ಲೂಕ್‌ನಲ್ಲಿನ ಖಾಲಿ ಹುದ್ದೆಗಳನ್ನು ತುಂಬುವ ಅಂಶವನ್ನು ಪರಿಗಣಿಸಲಾಗುವುದು.